ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6) ಸಪ್ರೌಶಾ/ಶಾ.ಕಾ.ಪ್ರ-23/2020-21 ದಿನಾಂಕ: 02.01.2021

" ಅತೀ ಮುಖ್ಯ"

-:ಜ್ಞಾಪನ:-

ವಿಷಯ: ರಾಜ್ಯದಲ್ಲಿ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳ ಪ್ರಾರಂಭ ಹಾಗೂ 6-9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮ ಕಾರ್ಯಕ್ರಮದ ಹಾಜರಾತಿ SATS ನಲ್ಲಿ ನಮೂದಿಸುವ ಕುರಿತು ಹಾಗೂ ಅನುಪಾಲನೆ ಮಾಡುವ ಕುರಿತು.

ಉಲ್ಲೇಖ: 1. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ: ದಿನಾಂಕ; 23.12.2020.

2. ಈ ಕಛೇರಿಯ ಸಮ ಸಂಖ್ಯೆ: ಜ್ಞಾಪನ ದಿನಾಂಕ: 30.12.2020.

3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಬೆಂಗಳೂರು ರವರು ದಿನಾಂಕ: 01.01.2021 ರಂದು ನಡೆದ ಸಭೆಯಲ್ಲಿ ಸೂಚಿಸಿರುವಂತೆ

********

ರಾಜ್ಯದಲ್ಲಿ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪ್ರಾರಂಭ ಹಾಗೂ 6ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ಕೋವಿಡ್- 19ರ ಹಿನ್ನೆಲೆಯಲ್ಲಿ ವಿದ್ಯಾಗಮ ಕಾರ್ಯಕ್ರಮವನ್ನು ದಿನಾಂಕ:01.01.2021 ರಿಂದ ಪುನರಾರಂಭಿಸಲು ಉಲ್ಲೇಖ(1)ರ ಸುತ್ತೋಲೆಗಳಲ್ಲಿ ಈಗಾಗಲೇ ನಿರ್ದೇಶಿಸಲಾಗಿದೆ.

ಉಲ್ಲೇಖ (2) ರಲ್ಲಿ ಶಾಲಾ ಪ್ರಾರಂಭ ಹಾಗೂ ವಿದ್ಯಾಗಮಕ್ಕೆ ಹಾಜರಾದ ಮಕ್ಕಳ ಮಾಹಿತಿಯನ್ನು ಎಲ್ಲಾ ಶಾಲೆಯ ಮುಖ್ಯಸ್ಥರುಗಳು ಇಲಾಖೆಯ ತಂತ್ರಾಂಶವಾದ ಎಸ್.ಎ.ಟಿ.ಎಸ್ ನಲ್ಲಿ ಅಳವಡಿಸಲು ತಿಳಿಸಲಾಗಿತ್ತು. ಆದರೆ ಕೆಲವು ಶಾಲೆಯ ಮುಖ್ಯಸ್ಥರು/ಆಡಳಿತ ಮಂಡಳಿಯವರು ಕ್ರಮಬದ್ದವಾಗಿ ಪೂರ್ಣ ಮಾಹಿತಿಯನ್ನು ತಂತ್ರಾಂಶದಲ್ಲಿ ದಾಖಲಿಸದೇ ಇರುವುದು ಕಂಡು ಬಂದಿರುತ್ತದೆ. ಆದ್ದರಿಂದ ಎಲ್ಲಾ ಶಾಲೆಗಳವರು ಹಾಜರಾತಿಯನ್ನು ಕಡ್ಡಾಯವಾಗಿ ಎಸ್.ಎ.ಟಿ.ಎಸ್‌ನಲ್ಲಿ ದಾಖಲಿಸಲು ಕ್ರಮವಹಿಸುವುದು.

ಪ್ರತಿ ದಿನ ಬೆಳಗಿನ ಅವಧಿಯ ಹಾಜರಾತಿ 12:00 ಗಂಟೆಯೊಳಗೆ ದಾಖಲಿಸಲು ತಿಳಿಸುವುದು. ಮಧ್ಯಾಹ್ನದ ಅವಧಿಯ ದಾಖಲಾತಿಯನ್ನು 3:00 ಗಂಟೆಯೊಳಗೆ ದಾಖಲಿಸುವುದು.

ಉಲ್ಲೇಖ(3)ರಲ್ಲಿ ಸದರಿ ಕಾರ್ಯಕ್ರಮವು ಎಸ್.ಓ.ಪಿ ಯಂತೆ ಜಾರಿಯಾಗುತ್ತಿರುವುದನ್ನು ಅನುಪಾಲಿಸಲು ಹಾಗೂ ಮಾರ್ಗದರ್ಶನ ನೀಡಲು ಉಪನಿರ್ದೇಶಕರು (ಆಡಳಿತ) ಇವರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣಾಧಿಕಾರಿಗಳು, ಡಿ.ವೈ.ಪಿ.ಸಿ, ಹಿರಿಯ ಉಪನ್ಯಾಸಕರು, ಉಪನ್ಯಾಸಕರು, ವಿಷಯ ಪರಿವೀಕ್ಷಕರು, ಸಹಾಯಕ ಕಾರ್ಯಕ್ರಮ ಸಮನ್ವಾಧಿಕಾರಿಗಳು, ದೈಹಿಕ ಶಿಕ್ಷಣ ಪರೀವಿಕ್ಷಕರು, ಕ್ಷೇತ್ರ ಸಮನ್ವಯಾಧಿಕಾರಿಗಳು, ಶಿಕ್ಷಣ ಸಂಯೋಜಕರು, ಬಿ.ಆರ್.ಪಿ ಮತ್ತು ಸಿ.ಆರ್.ಪಿ ಮುಂತಾದವರನ್ನೊಳಗೊಂಡ ತಲಾ ಇಬ್ಬರು ಸದಸ್ಯರು ಇರುವ ಶಾಲಾ ಉಸ್ತುವಾರಿ ತಂಡವನ್ನು ರಚಿಸಿ ಮಿಂಚಿನ ಸಂಚಾರದಂತೆ ಭೇಟಿ ನೀಡಿ ವರದಿ ಕ್ರೋಢೀಕರಿಸಿ ಜಿಲ್ಲಾ ಹಂತದಲ್ಲಿ ವರದಿ ಸಲ್ಲಿಸಲು ತಿಳಿಸುವುದು. ಹಾಗೂ ಸದರಿ ವರದಿ ಅನುಸಾರ ಜಿಲ್ಲೆಯಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದು.

ಶಾಲೆಗಳಲ್ಲಿ 10-15 ಮಕ್ಕಳಿಗೆ ಒಬ್ಬರಂತೆ ಮೆಂಟರ್ ಶಿಕ್ಷಕರನ್ನು ನೇಮಿಸಿ ಅವರು ಆ ಮಕ್ಕಳ ಆರೋಗ್ಯ, ಹಾಜರಾತಿ ಮುಂತಾದವುಗಳನ್ನು ಅನುಪಾಲಿಸಲು ತಿಳಿಸುವುದು.

ಮೇಲ್ಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಹಾಜರಾತಿಯನ್ನು ತಂತ್ರಾಂಶದಲ್ಲಿ ಆಯಾ ದಿನವೇ ನಿಗದಿತ ಅವಧಿಯೊಳಗೆ ನಮೂದಿಸಲು ಸೂಚಿಸಿದೆ. ಸದರಿ ಅಂಶವನ್ನು ಗಂಬೀರವಾಗಿ ಪರಿಗಣಿಸಿ ವಿಳಂಭ ನೀತಿ ಅನುಸರಿಸದೇ ಕ್ರಮವಹಿಸಲು ಸೂಚಿಸಿದೆ.

"ಮಾನ್ಯ ಆಯುಕ್ತರ ಆದೇಶದ ಮೇರೆಗೆ "

ನಿರ್ದೇಶಕರು (ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ:-

01. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಕ್ರಮವಹಿಸಲು ತಿಳಿಸಿದೆ.
02. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ),ರವರ ಮೂಲಕ ಮುಂದಿನ ಕ್ರಮಕ್ಕಾಗಿ,

**ಪ್ರತಿಯನ್ನು:**

01. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
03. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಕೆ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
04. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಮಾಹಿತಿಗಾಗಿ ಹಾಗೂ ಕ್ರಮ ಕೋರಿ.
05. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
06. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
07. ಕಛೇರಿ ಪ್ರತಿ